ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 82 (87)
ಮಾನ್ಯ ಸದಸ್ಯರ ಹೆಸರು : ಶ್ರೀ ಎಂ.ಎ ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 01.02.2021
ಉತ್ತರಿಸುವ ಸಚಿವರು : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
ಅ	ಹಾಸನ ಜಿಲ್ಲೆಯಲ್ಲಿ ಇಲ್ಲಿಯವರೆಗೆ ಮಹಾಮಾರಿ ಕೋವಿಡ್-19 ಕಾಯಿಲೆಗೆ ತುತ್ತಾಗಿ ಚಿಕಿತ್ಸೆ ಪಡೆದಿರುವ ರೋಗಿಗಳ ಸಂಖ್ಯೆ ಎಷ್ಟು; ಇವರ ಚಿಕಿತ್ಸೆಗಾಗಿ ಸರ್ಕಾರವು ಭರಿಸಿರುವ ವೆಚ್ಚವೆಷ್ಟು; (ಫಲಾನುಭವಿವಾರು ಸಂಪೂರ್ಣ ಮಾಹಿತಿ ನೀಡುವುದು)	ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ಅಡಿಯಲ್ಲಿ ಹಾಸನ ಜಿಲ್ಲೆಯಲ್ಲಿ ಇಲ್ಲಿಯವರೆಗೆ (ದಿ:27.01.2021) ಕೋವಿಡ್-19 ಕಾಯಿಲೆಗೆ ತುತ್ತಾಗಿ ಚಿಕಿತ್ಸೆ ಪಡೆದಿರುವ ರೋಗಿಗಳ ಸಂಖ್ಯೆ:3042 ಆಗಿರುತ್ತದೆ. ಕೋವಿಡ್-19 ಸಂಬಂಧ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್‌ಗೆ ಸರ್ಕಾರದಿಂದ ಪ್ರತ್ಯೇಕ ಅನುದಾನ ಬಿಡುಗಡೆಯಾಗಿರುವುದಿಲ್ಲ. ಆಯುಷ್ಮಾನ್ ಭಾರತ್ ಯೋಜನೆಯ ಲೆಕ್ಕ ಶೀರ್ಷಿಕೆ:2210-10-80-101-0-01 ಅಡಿ ವೆಚ್ಚವನ್ನು ಭರಿಸಲಾಗುತ್ತಿದೆ. ಹಾಸನ ಜಿಲ್ಲೆಯಲ್ಲಿ ಕೋವಿಡ್-19 ಚಿಕಿತ್ಸೆಗಾಗಿ ರೂ.384.90ಲಕ್ಷ ಮೊತ್ತವನ್ನು ಖರ್ಚು ಮಾಡಲಾಗಿರುತ್ತದೆ. (ಗೌಪ್ಯತೆ ಇರುವುದರಿಂದ ಫಲಾನುಭವಿಗಳ ಸಂಪೂರ್ಣ ಮಾಹಿತಿ ನೀಡಲು ಸಾಧ್ಯವಿರುವುದಿಲ್ಲ)
ಆ	ಹಾಸನ ಜಿಲ್ಲೆಯಲ್ಲಿ ಮಹಾಮಾರಿ ಕೋವಿಡ್-19 ಕಾಯಿಲೆಗೆ ತುತ್ತಾಗಿ ಮೃತರಾದವರ ಸಂಖ್ಯೆ ಎಷ್ಟು; ಮೃತರ ಕುಟುಂಬಗಳಿಗೆ ರಾಜ್ಯ ಸರ್ಕಾರದಿಂದ ಪರಿಹಾರವನ್ನು ವಿತರಿಸಲಾಗಿದೆಯೇ; ಹಾಗಿದ್ದಲ್ಲಿ, ಎಷ್ಟು ಕುಟುಂಬಗಳಿಗೆ ಪರಿಹಾರ ನೀಡಲಾಗಿದೆ; (ಫಲಾನುಭವಿವಾರು ಸಂಪೂರ್ಣ ಮಾಹಿತಿ ನೀಡುವುದು)	ದಿನಾಂಕ:26.01.2021ಕ್ಕೆ ಅನ್ವಯಿಸುವಂತೆ ಹಾಸನ ಜಿಲ್ಲೆಯಲ್ಲಿ ಮಹಾಮಾರಿ ಕೋವಿಡ್-19 ಕಾಯಿಲೆಗೆ ತುತ್ತಾಗಿ ಮೃತರಾದವರ ಸಂಖ್ಯೆ:394. ಮೃತರ ಕುಟುಂಬಗಳಿಗೆ ರಾಜ್ಯ ಸರ್ಕಾರದಿಂದ ಪರಿಹಾರ ನೀಡಲು ಅಧಿಸೂಚಿಸಿರುವುದಿಲ್ಲ.
ಇ	ರಾಜ್ಯ ಸರ್ಕಾರವು ಮಹಾಮಾರಿ ಕೋವಿಡ್-19 ಕಾಯಿಲೆಗೆ ತುತ್ತಾದ ಸಂತ್ರಸ್ತರಿಗೆ ಪರಿಹಾರ ನೀಡುತ್ತಿದೆಯೇ, ನೀಡುತ್ತಿದ್ದಲ್ಲಿ, ಪರಿಹಾರವನ್ನು ನೀಡಲು ಅನುಸರಿಸುತ್ತಿರುವ ಮಾರ್ಗಸೂಚಿಗಳೇನು? (ಸಂಪೂರ್ಣ ವಿವರ ನೀಡುವುದು)	ಇಲ್ಲ.

ಆಕುಕ 03 ಎಸ್‌ಬಿವಿ 2021

(ಡಾ॥ ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ವೈದ್ಯಕೀಯ ಶಿಕ್ಷಣ ಸಚಿವರು